ಇ) ಫಲಾನುಭವಿಗಳ ಆಯ್ಕೆಗೆ ಸಂಬಂಧಿಸಿದಂತೆ, ಕರ್ನಾಟಕ ಪಂಚಾಯತ್‌ರಾಜ್ ಕಾಯ್ದೆಗೆ ಸರ್ಕಾರವು ಅಧಿಸೂಚನೆ ಸಂಖ್ಯೆ SAMVYASHAE 33 SHASANA 2002 ದಿನಾಂಕ 22.09.2003 ರಲ್ಲಿ ತಿದ್ದುಪಡಿಯನ್ನು ಮಾಡಿದ್ದು ಸದರಿ ತಿದ್ದುಪಡಿಯ ಪ್ರಕಾರ ಆಶ್ರಯ ಮತ್ತು ಅಂಬೇಡ್ಕರ್ ವಸತಿ ಯೋಜನೆಗಳಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡುವ ಕಾರ್ಯವು ಗ್ರಾಮ ಪಂಚಾಯಿತಿಗಳ ಕಾರ್ಯ ವ್ಯಾಪ್ತಿಯಲ್ಲಿ ಬರುತ್ತದೆ. ಸದರಿ ಕಾಯ್ದೆಯಡಿಯಲ್ಲಿ ನಿಯಮಾನುಸಾರ ಆಯ್ಕೆ ಮಾಡಿದ ಪಟ್ಟಿಯು ಅಂತಿಮ ಪಟ್ಟಿಯಾಗಿರುತ್ತದೆ. ಆದ್ದರಿಂದ 2004–05 ರಿಂದ ಫಲಾನುಭವಿಗಳ ಆಯ್ಕೆಯ ವಿಷಯ ಗ್ರಾಮ ಪಂಚಾಯಿತಿಯ ವ್ಯಾಪ್ತಿಗೆ ಬರುತ್ತದೆ. ಆದ್ದರಿಂದ ಆಶ್ರಯ ಸಮಿತಿಯನ್ನು ರಚಿಸಿರುವುದಿಲ್ಲ.

5038 (5139) ಶ್ರೀ ಕೃಷ್ಣಮೂರ್ತಿ ಕೆ.ಎಂ. (ಕಡೂರು) :– ಮಾನ್ಯ ಉನ್ನತ ಶಿಕ್ಷಣ ಸಚಿವರು. ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ) ಕಾಲೇಜುಗಳಲ್ಲಿ ಅರೆಕಾಲಿಕ ಉಪನ್ಯಾಸಕರಾಗಿ ಸೇವೆ ಸಲ್ಲಿಸಿ ಬೇರೆ ಇಲಾಖೆಯಲ್ಲಿ ತಾತ್ಕಾಲಿಕವಾಗಿ ನೇಮಕಗೊಂಡಿರುವ ಅಭ್ಯರ್ಥಿಗಳನ್ನು ಉಪನ್ಯಾಸಕರನ್ನಾಗಿ ಖಾಯಂ ಮಾಡಿ ನೇಮಕ ಮಾಡುವುದು ಸರ್ಕಾರದ ಚಿಂತನೆಯಲ್ಲಿದೆಯೇ;

ಆ) ಹಾಗಿದ್ದರೆ, ಈ ಪ್ರಕ್ರಿಯೆ ಯಾವ ಹಂತದಲ್ಲಿದೆ?

ಶ್ರೀ ಡಿ. ಮಂಜುನಾಥ (ಉನ್ನತ ಶಿಕ್ಷಣ ಸಚಿವರು.)

ಅ) ಇಲ್ಲ

ಆ) ಪ್ರಶ್ನೆ (ಅ) ನೀಡಿರುವ ಉತ್ತರದ ಹಿನ್ನೆಲೆಯಲ್ಲಿ ಈ ಪ್ರಶ್ನೆ ಉದ್ಭವಿಸುವುದಿಲ್ಲ.

5039 (5964) ಶ್ರೀ ಮಲ್ಲಿಕಾರ್ಜುನ್ ಸಿದ್ರಾಮಪ್ಪ ಖೂಬಾ(ಬಸವಕಲ್ಯಾಣ) :– ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು. ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ) ಎಂಸಿಐ (ಇಂಡಿಯನ್ ಮೆಡಿಕಲ್ ಕೌನ್ಸಿಲ್) ನವರು ರಾಜ್ಯದಲ್ಲಿ ಹೊಸ ವೈದ್ಯಕೀಯ ಕಾಲೇಜುಗಳ ಸ್ಥಾಪನೆಗೆ ಸಲ್ಲಿಸಲಾಗಿದ್ದ ಪ್ರಸ್ತಾವನೆಗಳನ್ನು ತಿರಸ್ಕರಿಸಿರುವುದು ನಿಜವೇ, ಹಾಗಿದ್ದಲ್ಲಿ ಯಾವ ಕಾರಣಗಳಿಗಾಗಿ ಪ್ರಸ್ತಾವನೆಗಳನ್ನು ತಿರಸ್ಕರಿಸಲಾಗಿದೆ, ರಾಜ್ಯದಿಂದ ಕೇಂದ್ರಕ್ಕೆ ಕಳುಹಿಸಲಾದ ಪ್ರಕರಣಗಳ ವಿವರಗಳೇನು;

ಆ) ತಿರಸ್ಕೃತ ಪ್ರಸ್ತಾವನೆಗಳ ಕುರಿತಾದ ರಾಜ್ಯ ಸರ್ಕಾರದ ಪರ್ಯಾಯ ವ್ಯವಸ್ಥೆಗಳೇನು ;

ಇ) ಸರ್ಕಾರವು ಆದಷ್ಟು ಶೀಘ್ರವಾಗಿ ಎಂ..ಸಿ.ಐ. ನಿಗದಿಗೊಳಿಸಿರುವ ಮಾನದಂಡಗಳನ್ನು ಸೇರ್ಪಡೆ ಮಾಡಿ ಪುನಃ ಹೊಸ ಪ್ರಸ್ತಾವನೆಗಳನ್ನು ಸಲ್ಲಿಸುವುದೆ, ಹೌದಾದಲ್ಲಿ ಆ ಕುರಿತಾದ ವಿವರಗಳೇನು;

ಈ) ರಾಜ್ಯದಲ್ಲಿ ಹೊಸ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸಲು ಸರ್ಕಾರವು ಯಾವ ಮೂಲಭೂತ ಸೌಕರ್ಯಗಳನ್ನು ಒದಗಿಸಿದೆ, ಎಷ್ಟು ಹಣವನ್ನು ಇದಕ್ಕಾಗಿ ವೆಚ್ಚ ಮಾಡಿದೆ? (ಜಿಲ್ಲಾವಾರು ವಿವರಗಳನ್ನು ಒದಗಿಸುವುದು)

ಶ್ರೀ ಇಕ್ಬಾಲ್ ಆನ್ಸಾರಿ ವೈದ್ಯಕೀಯ ಶಿಕ್ಷಣ ಸಚಿವರು.

ಅ)(ಆ) ಮತ್ತು (ಇ) ಈಗಾಗಲೇ 2005–06 ನೇ ಶೈಕ್ಷಣಿಕ ಸಾಲಿನಿಂದ ಬೀದರ್ ಬೆಳಗಾಂ, ಮಂಡ್ಯ ಹಾಸನ, ರಾಯಚೂರು ಮತ್ತು ಶಿವಮೊಗ್ಗಗಳಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜುಗಳನ್ನು